# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 656(675)
2. ಸದಸ್ಯರ ಹೆಸರು : ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 21.08..2026
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ಹೆಚ್ಚುತ್ತಿರುವ ಅಂತರಾಷ್ಟ್ರೀಯ ಪ್ರವಾಸಿಗರು, ಉದ್ದಿಮೆದಾರರು, ಪ್ರಯಾಣಿಕರ ಕಾರಣಕ್ಕಾಗಿ ದಟ್ಟನೆಗೆ ಒಳಗಾಗಿದ್ದು, ಜನರ ಅನುಕೂಲಕ್ಕಾಗಿ ಸರ್ಕಾರ ಇನ್ನೊಂದು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮಾಡಲು ಮುಂದಾಗಿರುವುದು ನಿಜವೇ; | ಹೌದು, ಸರ್ಕಾರವು ಬೆಂಗಳೂರು ನಗರದಲ್ಲಿ 2ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ಈ ಸಂಬಂಧ ಸೂಕ್ತ ಸ್ಥಳದ ಆಯ್ಕೆ ಸೇರಿದಂತೆ ಅಗತ್ಯ ಕ್ರಮಗಳನ್ನು ಸರ್ಕಾರವು ಕೈಗೊಳ್ಳುತ್ತಿದೆ. |
| (ಆ) | ಬೆಂಗಳೂರು, ಮೈಸೂರು, ತುಮಕೂರು ಭಾಗಗಳಲ್ಲಿಯೇ ಕೇಂದ್ರೀಕೃತವಾಗಿ ಬಹುಪಾಲು ಉದ್ದಿಮೆಗಳು ಸ್ಥಾಪನೆಯಾದ ಕಾರಣಕ್ಕಾಗಿ ಉತ್ತರ ಕರ್ನಾಟಕದ ಭಾಗದಲ್ಲಿಯೂ ಕೂಡಾ ಉದ್ದಿಮೆಗಳ ಬೆಳವಣಿಗೆಯ ನಿಟ್ಟಿನಲ್ಲಿ ಮಧ್ಯ ಕರ್ನಾಟಕದ ಹೊಸಪೇಟೆಯ ಆಸುಪಾಸಿನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ; | ವಿಜಯನಗರ ಜಿಲ್ಲೆಯ ಹೊಸಪೇಟೆ ಸುತ್ತಮುತ್ತಲಿನ ಪ್ರದೇಶದಲ್ಲಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸ್ಥಾಪಿಸುವ ಕುರಿತು ಪ್ರಸ್ತುತ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ, ಉತ್ತರ ಕರ್ನಾಟಕದ ಕೈಗಾರಿಕಾ ಮತ್ತು ಪ್ರವಾಸೋದ್ಯಮ ಅಭಿವೃದ್ಧಿಗೆ ಅನುಗುಣವಾಗಿ ವಿಮಾನಯಾನ ಮೂಲಸೌಕರ್ಯವನ್ನು ಬಲಪಡಿಸಲು ಸರ್ಕಾರವು ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. |
| ಇ) | ಉದ್ದೇಶಿಸಿದ್ದಲ್ಲಿ, ಉತ್ತರ ಕರ್ನಾಟಕ ಭಾಗದಲ್ಲಿ ಉದ್ದಿಮೆಗಳನ್ನು ಪ್ರಾರಂಭಿಸಬೇಕೆನ್ನುವ ಹೊರರಾಷ್ಟ್ರ ಹಾಗೂ ಹೊರ ರಾಜ್ಯದ ಉದ್ದಿಮೆದಾರರಿಗೆ ಅಲ್ಲದೇ ಹಂಪಿ ಇನ್ನಿತರ ಐತಿಹಾಸಿಕ ಸ್ಥಳಗಳ ವೀಕ್ಷಣೆಗೆ ಬರುವ ವಿದೇಶಿಗರಿಗೆ ಹಾಗೂ ಹೊರ ರಾಜ್ಯದವರಿಗೆ ಅನುಕೂಲವಾಗುತ್ತದೆ ಮತ್ತು ಮೇಲಿಂದ ಮೇಲೆ ಅಲ್ಲಿಗೆ ಬಂದು ಹೋಗಲು ಸಮಯದ ಉಳಿತಾಯ ಆಗುವುದರ ಜತೆಗೆ ಉತ್ತರ ಕರ್ನಾಟಕದಲ್ಲಿ ಹೊಸ ಹೊಸ ಉದ್ದಿಮೆಗಳು ಬೆಳೆದು ಮತ್ತು ಪ್ರವಾಸೋದ್ಯಮಕ್ಕೂ ಕೂಡಾ ಇಂಬು ಸಿಕ್ಕಂತಾಗುತ್ತದೆ; ಅಲ್ಲದೇ ಸದರಿ ವಿಮಾನ ನಿಲ್ದಾಣದಿಂದ ಉದ್ಯೋಗಾವಕಾಶಗಳು ಹೆಚ್ಚಿ, ಉತ್ತರ ಕರ್ನಾಟಕದ ಒಟ್ಟಾರೆ ಅಭಿವೃದ್ಧಿಗೆ ವೇಗ ದೊರೆಯುತ್ತದೆ; ಈ ಕುರಿತು ಮಾಹಿತಿ ಒದಗಿಸುವುದು; | ಪ್ರಸ್ತುತ ರಾಜ್ಯದಲ್ಲಿ ಒಟ್ಟು 9 ವಿಮಾನ ನಿಲ್ದಾಣಗಳು ಕಾರ್ಯಾಚರಣೆಯಲ್ಲಿವೆ. ಇವುಗಳಲ್ಲಿ ಉತ್ತರ ಕರ್ನಾಟಕದ ಹುಬ್ಬಳ್ಳಿ, ಬೆಳಗಾವಿ, ಕಲಬುರಗಿ, ಬೀದರ್ ಮತ್ತು ವಿದ್ಯಾನಗರ (ಜಿಂದಾಲ್) ವಿಮಾನ ನಿಲ್ದಾಣಗಳು ಕಾರ್ಯಾಚರಣೆಯಲ್ಲಿವೆ. ಅಲ್ಲದೇ, ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿಗಳು ಪೂರ್ಣಗೊಂಡಿದ್ದು, ಸದ್ಯದಲ್ಲೇ ವಿಮಾನಯಾನ ಕಾರ್ಯಾಚರಣೆಯನ್ನು ಪ್ರಾರಂಭಿಸಲು ಸರ್ಕಾರವು ಉದ್ದೇಶಿಸಿದೆ. ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಗಳು ಪ್ರಗತಿಯಲ್ಲಿವೆ. ಇದಲ್ಲದೇ, ರಾಜ್ಯದಲ್ಲಿ ಪ್ರವಾಸೋದ್ಯಮ ಮತ್ತು ಕೈಗಾರಿಕೆಗಳ ಅಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಬಳ್ಳಾರಿ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಹಾಗೂ ಹಂಪಿಯಲ್ಲಿ ಹೆಲಿಪೋರ್ಟ್ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರವು ಕ್ರಮ ಕೈಗೊಳ್ಳುತ್ತಿದೆ.<br><br>ಈ ಮೂಲಸೌಕರ್ಯಗಳ ಅಭಿವೃದ್ಧಿಯಿಂದ ಪ್ರದೇಶದ ಸಂಪರ್ಕ ವ್ಯವಸ್ಥೆ ಸುಧಾರಿಸುವುದರ ಜೊತೆಗೆ ಕೈಗಾರಿಕೆ, ಪ್ರವಾಸೋದ್ಯಮ ಹಾಗೂ ಉದ್ಯೋಗಾವಕಾಶಗಳ ಬೆಳವಣಿಗೆಗೆ ಉತ್ತೇಜನ ದೊರೆಯಲಿದೆ. |

| | | |
|---|---|---|
| ಈ | ಹಾಗಿದ್ದಲ್ಲಿ ಮಧ್ಯ ಕರ್ನಾಟಕದಲ್ಲಿ ಬರುವ ಹೊಸಪೇಟೆ ಸುತ್ತಲಿನ ಸೂಕ್ತವಾದ ಪ್ರದೇಶದಲ್ಲಿ ಎರಡನೇಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾರಂಭಿಸಲು ಸರ್ಕಾರ ಕ್ರಮವಹಿಸುವುದೇ? | ಮಧ್ಯ ಕರ್ನಾಟಕದ ಹೊಸಪೇಟೆ ಸುತ್ತಮುತ್ತಲಿನ ಸೂಕ್ತ ಪ್ರದೇಶದಲ್ಲಿಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸ್ಥಾಪಿಸುವ ಕುರಿತು ಪ್ರಸ್ತುತ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಸಂಖ್ಯೆ: ಮೂಅಇ 210 ರಾಅವಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು